## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 678 (773)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 20.12.2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ದಿನಾಂಕ:01-08-2008ರ ನಂತರ ನೇಮಕಾತಿ ಹೊಂದಿದ ಮತ್ತು ಬಡ್ತಿ ಪಡೆದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜಿನ ಶಿಕ್ಷಕರು/ಉಪನ್ಯಾಸಕರಿಗೆ ವಿಶೇಷ ಭತ್ಯೆ ಮಂಜೂರಾತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಸದರಿ ವಿಷಯದ ಸಂಬಂಧ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯವು ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಾನ್ಯ ಕೆ.ಎ.ಟಿ ಅರ್ಜಿ ಸಂಖ್ಯೆ:4412-4428, 4430-4444, 4446-4464, 4467-5224/2020 ಶ್ರೀ ಲಕ್ಷ್ಮೀನಾರಾಯಣ ಭಟ್ ಮತ್ತಿತರರು, ಪ್ರಕರಣ ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ದಿನಾಂಕ:05/05/2021ರಂದು ನೀಡಿರುವ ತೀರ್ಪಿನಲ್ಲಿ ದಿನಾಂಕ:01/08/2008ರ ನಂತರ ನೇಮಕಾತಿ ಹೊಂದಿರುವ ಸರ್ಕಾರಿ ಪ್ರೌಢಶಾಲಾ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡುವಂತೆ ತೀರ್ಪು ನೀಡಿರುತ್ತದೆ.<br><br>ಸದರಿ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ದಿನಾಂಕ:05-05-2021ರ ತೀರ್ಪಿನ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸರ್ಕಾರವು ರಿಟ್ ಪಿಟಿಷನ್ ದಾಖಲಿಸಲು ಕ್ರಮವಹಿಸಲಾಗುತ್ತಿದೆ. |
| ಇ | ಹಾಗಾದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿನ ಸಾರಾಂಶವೇನು; | |
| ಈ | ಮಾನ್ಯ ಉಚ್ಚನ್ಯಾಯಾಲಯದ ತೀರ್ಪನ್ನು ಇದುವರೆವಿಗೂ ಅನುಷ್ಠಾನಗೊಳಿಸದಿರಲು ಕಾರಣಗಳೇನು; | |
| ಉ) | ಯಾವ ಕಾಲಮಿತಿಯಲ್ಲಿ ಸದರಿ ವಿಶೇಷ ಭತ್ಯೆಯನ್ನು ನೀಡಲಾಗುವುದು? | ಮಾನ್ಯ ಉಚ್ಚ ನ್ಯಾಯಾಲಯವು ನೀಡುವ ತೀರ್ಪನ್ನು ಅನುಸರಿಸಿ ಮುಂದಿನ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು. |

**ಸಂಖ್ಯೆ: ಇಪಿ 109 ಎಲ್‌ಬಿಪಿ 2021**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು